## ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

**ವಿಷಯ:-** ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಪುರದಕೆರೆ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಒಟ್ಟಾರೆ ರೂ.850.00 ಕೋಟಿಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕೆಎನ್ಎನ್/ಡಿಪಿಆರ್ ಉಡುಗಣಿ-ತಾಳಗುಂದ-ಹೊಸೂರು/2018-19/7085 ದಿನಾಂಕ: 16.03.2019.
2. ಸರ್ಕಾರದ ಆದೇಶ ಸಂಖ್ಯೆ: ಜಸಂಇ 13 ಎಂಎಂಬಿ 2019, ದಿನಾಂಕ: 01.08.2019.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:2382 ದಿನಾಂಕ: 03.08.2019.
4. ಸರ್ಕಾರದ ಆದೇಶ ಸಂಖ್ಯೆ: ಜಸಂಇ 13 ಎಂಎಂಬಿ 2019, ದಿನಾಂಕ: 03.08.2019.

---***---

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರು, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳಲ್ಲಿ ಮಳೆಯ ಆಭಾವದಿಂದ ಕೆರೆಗಳಲ್ಲಿ ನಿಗಧಿತ ಪ್ರಮಾಣದಲ್ಲಿ ನೀರಿನ ಸಂಗ್ರಹಣೆ ಆಗದೇ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗಿರುವುದರಿಂದ, ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಮತ್ತು ಅಂತರ್ಜಲ ಮಟ್ಟ ವೃದ್ಧಿಸುವ ಉದ್ದೇಶದಿಂದ, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಪುರದಕೆರೆ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಯೋಜನೆಯನ್ನು ರೂಪಿಸಲಾಗಿದೆ ಎಂದು ತಿಳಿಸಿರುತ್ತಾರೆ. ಮುಂದುವರೆದು, ಸದರಿ ಯೋಜನೆಯ ಒಟ್ಟಾರೆ ರೂ.850.00 ಕೋಟಿಗಳ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ಕೋರಿ, ಪ್ರಸ್ತಾವನೆಯನ್ನು ದಿನಾಂಕ:28.12.2018 ರಂದು ನಡೆದ ಕರ್ನಾಟಕ ನೀರಾವರಿ ನಿಗಮದ 46ನೇ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯು ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಿರುತ್ತಾರೆ.

ಅದರಂತೆ, ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ: 01.02.2019 ರಂದು ನಡೆದ ಕರ್ನಾಟಕ ನೀರಾವರಿ ನಿಗಮದ ಮಂಡಳಿಯ 86ನೇ ಸಭೆಯಲ್ಲಿ ಮಂಡಿಸಿದ್ದು, ಸದರಿ ಯೋಜನೆಯ ರೂ.850.00 ಕೋಟಿಗಳ ಉಡುಗಣಿ-ತಾಳಗುಂದ-ಹೊಸೂರು ಏತ ನೀರಾವರಿ ಯೋಜನೆಯ ಒಟ್ಟಾರೆ ಕಾಮಗಾರಿಗಳ ಪೈಕಿ ಯೋಜನೆಯ ಮೊದಲನೇ ಹಂತದ ಹೆಡ್‌ವರ್ಕ್ಸ್ ಮತ್ತು ರೈಸಿಂಗ್ ಮೇನ್‌ನ ರೂ.425.00 ಕೋಟಿಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಮಂಡಳಿಯು ಅನುಮೋದಿಸಿ. ಸದರಿ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಶಿಫಾರಸ್ಸು ಮಾಡಿರುತ್ತದೆ. ಆದ್ದರಿಂದ, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಪುರದಕೆರೆ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಒಟ್ಟಾರೆ ರೂ.850.00 ಕೋಟಿಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಈ ಕಾಮಗಾರಿಗಳ ಪೈಕಿ, ಮೊದಲನೇ ಹಂತದ ಹೆಡ್‌ವರ್ಕ್ಸ್ ಮತ್ತು ರೈಸಿಂಗ್ ಮೇನ್‌ನ ರೂ.425.00 ಕೋಟಿಗಳ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ., ರವರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಮೇಲೆ ಓದಲಾದ (2) ರ ಆದೇಶದಲ್ಲಿ, ಆರ್ಥಿಕ ಇಲಾಖೆಯ ಅಭಿಪ್ರಾಯದಂತೆ ರೂ.200.00 ಕೋಟಿಗಳಿಗೆ ಯೋಜನೆಯನ್ನು ಮಿತಿಗೊಳಿಸಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3) ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು, ಸದರಿ ಯೋಜನೆಯ ಅಂದಾಜು ಮೊತ್ತ ರೂ. 850.00 ಕೋಟಿ ಮೊತ್ತದ ಯೋಜನಾ ವರದಿಯನ್ನು ರೂ. 200.00 ಕೋಟಿಗಳಿಗೆ ಸೀಮಿತಗೊಳಿಸಿದಲ್ಲಿ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ತಾಂತ್ರಿಕವಾಗಿ ಕಾರ್ಯಸಾಧುವಾಗುವುದಿಲ್ಲವೆಂದೂ ಮತ್ತು ಯೋಜನೆಯ ಉದ್ದೇಶವನ್ನು ನೆರವೇರಿಸುವುದು ಕಷ್ಟಸಾಧ್ಯವಾಗುವುದು ಎಂದು ತಿಳಿಸಿ ಸದರಿ ಶಿಕಾರಿಪುರ ತಾಲ್ಲೂಕು ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳ ಕೆರೆಗಳಿಗೆ ತುಂಗ-ಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಯೋಜನೆಗೆ ರೂ. 850.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಿ ಸನ್ಮಾನ್ಯ ಮುಖ್ಯ ಮಂತ್ರಿಗಳ ಮೌಖಿಕ ಆದೇಶದನುಸಾರ, ಮೇಲೆ ಓದಲಾದ (4) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ ಜಸಂಇ 13 ಎಂಎಂಬಿ 2019 ದಿನಾಂಕ. 01.08.2019 ಅನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು, ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಪುರದಕೆರೆ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಒಟ್ಟಾರೆ ರೂ.850.00 ಕೋಟಿಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಸರ್ಕಾರದ ಆದೇಶವನ್ನು ಹೊರಡಿಸಲಾಗಿತ್ತು ಹಾಗೂ ಸದರಿ ಕ್ರಮವನ್ನು ಸ್ಥಿರೀಕರಣಕ್ಕಾಗಿ ಸಚಿವ ಸಂಪುಟದ ಮುಂದೆ ಮಂಡಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 13 ಎಂಎಂಬಿ 2019; ಬೆಂಗಳೂರು, ದಿನಾಂಕ:07.09.2019.**

**ಅ) ಸರ್ಕಾರದ ಆದೇಶ ಸಂಖ್ಯೆ: ಜಸಂಇ 13 ಎಂ.ಎಂ.ಬಿ 2019, ಬೆಂಗಳೂರು ದಿನಾಂಕ: 01.08.2019 ರನ್ನು ಹಿಂಪಡೆಯಲಾಗಿದೆ.**

ಆ) ಸರ್ಕಾರದ ಆದೇಶ ಸಂಖ್ಯೆ: ಜಸಂಇ 13 ಎಂಎಂಬಿ 2019 ಬೆಂಗಳೂರು ದಿನಾಂಕ:03.08.2019 ರನ್ನು ರದ್ದು ಪಡಿಸಲಾಗಿದೆ.

ಇ) ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕಿನ ಉಡುಗಣಿ-ತಾಳಗುಂದ-ಹೊಸೂರು ಹೋಬಳಿಗಳ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಪುರದಕೆರೆ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಒಟ್ಟಾರೆ ರೂ.850.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಹಾಗೂ ಒಟ್ಟು ಕಾಮಗಾರಿಗೆ ಟೆಂಡರ್ ಕರೆದು ಹಂತ ಹಂತವಾಗಿ ಹಣ ಬಿಡುಗಡೆ ಮಾಡುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಂಖ್ಯೆ:6280 ದಿನಾಂಕ: 05.09.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/9/19

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).
ಜಲ ಸಂಪನ್ಮೂಲ ಇಲಾಖೆ

<u>ಪ್ರತಿಯನ್ನು:</u>

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
5. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂ:ಸಿ:511/2019 ದಿನಾಂಕ:06.09.2019 ರನ್ವಯ ಕಳುಹಿಸಿದೆ.
7. ಮಾನ್ಯ ಮುಖ್ಯ ಮಂತ್ರಿರವರ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.